# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ,ತುಮಕೂರು-572 103 ☎:0816 - 2255650,2273511 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ: ಪ.ವಿ:ಬಿ.ಪಿ.ಇಡಿ.:ಪ.ಶುಲ್ಕ.:2018-19 : 33 ದಿನಾಂಕ: 09.04.2018

## ಅಧಿಸೂಚನೆ

ವಿಷಯ: 2017-18 ನೇ ಶೈಕ್ಷಣಿಕ ಸಾಲಿನ 2018 ರ ಮೇ/ಜೂನ್ ಮಾಹೆಗಳಲ್ಲಿ ನಡೆಯಲಿರುವ ಸ್ನಾತಕ ದೈಹಿಕ ಶಿಕ್ಷಣ ಪದವಿಯ ಎರಡು & ನಾಲ್ಕನೇ ಸೆಮಿಸ್ಟರ್ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ : 1. ಕ.ಸ. ತಿದ್ದುಪಡಿ ಮತ್ತು ಸೇರ್ಪಡೆ ಆದೇಶ ಸಂಖ್ಯೆ : ಹಿಂವಕ 589 ಬಿಎಂಎಸ್ 2013 ದಿನಾಂಕ: 06.08.2014

2. ಕ.ಸ. ಆದೇಶ ಸಂಖ್ಯೆ : ಹಿಂವಕ 589 ಬಿಎಂಎಸ್ 2013 ದಿನಾಂಕ: 05.10.2013
3. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪ್ರಕಟಣೆ ಸಂಖ್ಯೆ / ಹಿಂವಕ/ ವಿವೇ/ಸಿಆರ್-34 /2014-15 ದಿನಾಂಕ: 19.09.2014
4. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 07.04.2018

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2017-18 ನೇ ಶೈಕ್ಷಣಿಕ ಸಾಲಿನ 2018 ರ ಮೇ/ಜೂನ್ ಮಾಹೆಗಳಲ್ಲಿ ನಡೆಯಲಿರುವ ಸ್ನಾತಕ ದೈಹಿಕ ಶಿಕ್ಷಣ(ಬಿ.ಪಿ.ಇಡಿ.) ಪದವಿಯ **ಎರಡು & ನಾಲ್ಕನೇ (ನವೀನ & ಪೂರಕ)** ಸೆಮಿಸ್ಟರ್‌ನ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು.

**ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆದರೆ ಸಂಬಂಧಿಸಿದ ವಿದ್ಯಾರ್ಥಿಗಳು ಶೈಕ್ಷಣಿಕ ವಿಭಾಗದಿಂದ ಪ್ರವೇಶಾನುಮೋದನೆಯಾದ ವಿಷಯಗಳಿಗೆ / ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ / ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಾಸವಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.**

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 16.04.2018 |
| 2. | ವಿದ್ಯಾರ್ಥಿಗಳಿಗೆ ರೂ. 100/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 20.04.2018 |
| 3. | ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 21.04.2018 |
| 4. | ಕಾಲೇಜಿನವರು ವಿಶ್ವವಿದ್ಯಾನಿಲಯದ ಖಾತೆಗೆ ಪಾವತಿಸಲು ಕೊನೆಯ ದಿನಾಂಕ | 23.04.2018 |

| ಕ್ರ.ಸಂ | ಸೆಮಿಸ್ಟರ್ | ಕೋರ್ಸ್ | ನವೀನ | ಪೂರಕ (ಒಂದು ವಿಷಯಕ್ಕೆ) |
|---|---|---|---|---|
| 1. | ಎರಡು & ನಾಲ್ಕನೇ | ಬಿ.ಪಿ.ಇಡಿ. | ರೂ. 1,000-00 | ರೂ. 100-00 |

(...2)

ಪರೀಕ್ಷಾ ಶುಲ್ಕದಲ್ಲಿ ರಿಯಾಯಿತಿ ಪಡೆದಿರುವ ವಿದ್ಯಾರ್ಥಿಗಳೂ ಸಹ ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು.

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ( ಪ್ರತಿ ಸೆಮಿಸ್ಟರ್‌ಗೆ) | 150-00 |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 25-00 |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 10-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Process fee) ( ಪ್ರತಿ ಸೆಮಿಸ್ಟರ್‌ಗೆ) | 35-00 |
| 5. | ಪ್ರಾಯೋಗಿಕ ಪರೀಕ್ಷಾ ಶುಲ್ಕ ( ಒಂದು ವಿಷಯಕ್ಕೆ) | 50-00 |
| 6. | ಮೌಖಿಕ ಸಂದರ್ಶನ (UG Viva ) ( ಒಂದು ವಿಷಯಕ್ಕೆ) | 150-00 |
| 7. | ಪ್ರಾಜೆಕ್ಟ್ ವ್ಯಾಲ್ಯೂವೇಷನ್ (UG Project Evaluation ) ( ಒಂದು ವಿಷಯಕ್ಕೆ) | 100-00 |

*ಅರ್ಜಿ ಪರಿಶೀಲನಾ ಶುಲ್ಕ **ರೂ.**10-00 ಗಳಲ್ಲಿ ರೂ. 06-00 ಗಳನ್ನು ಪರೀಕ್ಷಾ ಕೇಂದ್ರದಲ್ಲಿ ಉಳಿಸಿಕೊಂಡು ಉಳಿದ ರೂ.04-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

*ಆನ್‌ಲೈನ್ ಅರ್ಜಿ ಶುಲ್ಕ **ರೂ.**25-00 ಗಳಲ್ಲಿ ರೂ.05-00 ಗಳನ್ನು ಕಾಲೇಜಿನವರು ಉಳಿಸಿಕೊಂಡು ಉಳಿದ ರೂ.20-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

## ಶುಲ್ಕ ವಿನಾಯಿತಿ

**ಸಂಬಂಧಪಟ್ಟ ಇಲಾಖೆಗಳಿಂದ ಈಗಾಗಲೇ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದಂತಹ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕದಲ್ಲಿ ವಿನಾಯಿತಿ ಪಡೆಯಲು ಅರ್ಹರಿರುತ್ತಾರೆ.**

1. **ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ:**
   ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಎಲ್ಲಾ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ **ರೂ.**2.50 ಲಕ್ಷದೊಳಗಿದ್ದು, ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದ್ದರೆ ಅಂತಹ ವಿದ್ಯಾರ್ಥಿಗಳಿಂದ ಒತ್ತಾಯ ಪೂರ್ವಕವಾಗಿ ಪರೀಕ್ಷಾ ಶುಲ್ಕವನ್ನು ಪಡೆಯುವಂತಿಲ್ಲ.

2. **ಪ್ರವರ್ಗ – 1, 2ಎ, 2ಬಿ, 3ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ:**
   ಪ್ರವರ್ಗ–1 ರ ವಿದ್ಯಾರ್ಥಿಗಳಿಗೆ **ರೂ.** 2.50 ಲಕ್ಷ, ಇತರೆ ಹಿಂದುಳಿದ ವರ್ಗಗಳಾದ 2ಎ, 2ಬಿ, 3ಎ, 3ಬಿ ಮತ್ತು ಕೇಂದ್ರ ಸರ್ಕಾರದ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಹಾಗೂ ಇತರೆ ಜನಾಂಗದವರು (ಉದಾ: ಬ್ರಾಹ್ಮಣ, ವೈಶ್ಯ ಇತ್ಯಾದಿ) ಸಮುದಾಯಗಳಿಗೆ ಸೇರಿದ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ **ರೂ.**1.00 ಲಕ್ಷದೊಳಗಿದ್ದರೆ ಅಂತಹ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿಗೆ ಅರ್ಹರಿರುತ್ತಾರೆ.

**ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ.**

ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

(...3)

ವಿಶ್ವವಿದ್ಯಾನಿಲಯದಿಂದ ಅನುಮೋದನೆ ಪಡೆದ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ RTGS/NEFT **ಮೂಲಕ ಎಸ್.ಬಿ.ಐ. ಖಾತೆ ನಂ.36954908103 ಗೆ ಪರೀಕ್ಷಾ ಶುಲ್ಕವನ್ನು ದಿನಾಂಕ 23.04.2018 ರೊಳಗೆ ಪಾವತಿಸಿ ಮತ್ತು** ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ಪಟ್ಟಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ (ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ನಕಲು ಪ್ರತಿ) ಪ್ರಾಂಶುಪಾಲರು ದೃಢೀಕರಿಸಿ **ದಿನಾಂಕ 23.04.2018** ರೊಳಗೆ ವಿಶ್ವವಿದ್ಯಾನಿಲಯಕ್ಕೆ. **ಪರೀಕ್ಷಾ ಶುಲ್ಕದ ಹಣಕಾಸು ಪಟ್ಟಿಯನ್ನು ದ್ವಿಪ್ರತಿಗಳಲ್ಲಿ. (ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು).**

ಪ್ರಾಯೋಗಿಕ ಪರೀಕ್ಷೆಗಳನ್ನು ಸೈದ್ಧಾಂತಿಕ ಪರೀಕ್ಷೆಗಳಿಗಿಂತ ಮೊದಲು ನಡೆಸತಕ್ಕದ್ದು. ಪ್ರಾಯೋಗಿಕ ಪರೀಕ್ಷಾ ವೇಳಾಪಟ್ಟಿಯನ್ನು ಪರೀಕ್ಷಾ ಅಧೀಕ್ಷಕರು ಸಂಬಂಧಿಸಿದ ಪರೀಕ್ಷಾ ಕೇಂದ್ರದಲ್ಲಿ ಪ್ರಕಟಿಸುವುದು.

ಸೈದ್ಧಾಂತಿಕ (ಪಠ್ಯ ವಿಷಯ - Theory) ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ತಿಳಿಸಲಾಗುವುದು.

ಆಂತರಿಕ ಅಂಕಗಳ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವ ಮೊದಲು ಪ್ರಾಂಶುಪಾಲರು ಖುದ್ದಾಗಿ ಪರಿಶೀಲಿಸಿ ನಂತರ **ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರಿಗೆ **ದಿನಾಂಕ:** 28.05.2018 ರೊಳಗೆ ಸಲ್ಲಿಸತಕ್ಕದ್ದು. **ಒಂದು ಬಾರಿ ಸಲ್ಲಿಸಿದ ನಂತರ ಯಾವುದೇ ಕಾರಣಕ್ಕೂ ತಿದ್ದುಪಡಿ ಮಾಡುವುದಿಲ್ಲ ಎಂಬ ಅಂಶವನ್ನು ಗಮನಿಸುವುದು.** ವಿಳಂಬವಾದಲ್ಲಿ ದಿನವೊಂದಕ್ಕೆ **ರೂ.** 1,000/- ಗಳಂತೆ ಗರಿಷ್ಠ **ರೂ.** 10,000-00 **(ಹತ್ತು ದಿನಗಳು)** ಗಳ ದಂಡಶುಲ್ಕದೊಂದಿಗೆ ಪ್ರತಿಯನ್ನು ಪರೀಕ್ಷಾಂಗ ವಿಭಾಗಕ್ಕೆ ಸಲ್ಲಿಸುವುದು. ಸೆಮಿಸ್ಟರ್‌ವಾರು ಆಂತರಿಕ ಅಂಕಗಳನ್ನು ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಅಂಗೀಕರಿಸಲಾಗುವುದಿಲ್ಲ ನಂತರ ಆಗುವ ತಪ್ಪುಗಳಿಗೆ ಪ್ರಾಂಶುಪಾಲರುಗಳೇ ಜವಾಬ್ದಾರರಾಗಿರುತ್ತಾರೆ.

ಪ್ರಾಂಶುಪಾಲರು ಸಹಕರಿಸಬೇಕಾಗಿ ಕೋರಲಾಗಿದೆ.

**ಕುಲಸಚಿವರು(ಮೌಲ್ಯಮಾಪನ)**

ಗೆ,

**ಪ್ರಾಂಶುಪಾಲರು, ಶ್ರೀ. ಸಿದ್ಧಗಂಗಾ ದೈಹಿಕ ಶಿಕ್ಷಣ ಮಹಾವಿದ್ಯಾಲಯ, ಸಿದ್ಧಗಂಗಾ ಮಠ, ತುಮಕೂರು.**

**ಪ್ರತಿಗಳು:**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
4. ಜಿಲ್ಲಾ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
5. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಉಪಕುಲಸಚಿವರು(ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಮಾನ್ಯ ಕುಲಸಚಿವರ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
10. ಕಛೇರಿ ಪ್ರತಿ.